ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 13 ಬಿಎಲ್‌ಡಿ 2018
ಅಡಕ:

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:12-08-2020.

## ಸುತ್ತೋಲೆ

**ವಿಷಯ:** 2020ರ ಸೆಪ್ಟೆಂಬರ್ ಮಾಹೆಯಲ್ಲಿ ನಡೆಯುವ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆ ಬರೆಯುವ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ಕೋವೀಡ್-19 ಪೆಂಡಮಿಕ್ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಿ ವಸತಿ ನಿಲಯದಲ್ಲಿ ತಂಗಲು ಸೂಕ್ತ ವ್ಯವಸ್ಥೆ ಕಲ್ಪಿಸುವ ಬಗ್ಗೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:07/09/2020 ರಿಂದ 28/09/2020 ರ ತನಕ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗಳು ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಜರುಗಲ್ಲಿದ್ದು, ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗಳನ್ನು ಬರೆಯುವಂತಹ ಹಲವಾರು ವಿದ್ಯಾರ್ಥಿಗಳು ವಸತಿನಿಲಯದ ವಿದ್ಯಾರ್ಥಿಗಳಾಗಿರುತ್ತಾರೆ. ಕೋವೀಡ್-19 ಪೆಂಡಮಿಕ್ ಹಿನ್ನೆಲೆಯಲ್ಲಿ ಕೊರೋನಾ ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಬಗ್ಗೆ ಹಾಗೂ ಅದು ಹಡದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು (SOP's) ಅನುಸರಿಸಿ ವಿದ್ಯಾರ್ಥಿಗಳಿಗೆ ವಸತಿನಿಲಯದಲ್ಲಿ/ನಿಲಯಗಳಲ್ಲಿ ತಂಗಲು ಅವಕಾಶ ಕಲ್ಪಿಸುವುದು ಅನಿವಾರ್ಯವಾಗಿರುತ್ತದೆ. ಆದ ಕಾರಣ ರಾಜ್ಯದ ಎಲ್ಲಾ ಪಾಲಿಟೆಕ್ನಿಗಳ ಪ್ರಾಚಾರ್ಯರು ಹಾಗೂ ನಿಲಯ ಪಾಲಕರು ಪರೀಕ್ಷಾ ಅವಧಿಯಲ್ಲಿ ಕೋವೀಡ್ ನಿಯಂತ್ರಣ SOP ಗಳನ್ನು ಸ್ಥಳೀಯ ಪರಿಸ್ಥಿತಿಗಳಿಗನುಗುಣವಾಗಿ ಅಳವಡಿಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ವಸತಿನಿಲಯಗಳಲ್ಲಿ ತಂಗಲು ಹಾಗೂ ಸೂಕ್ತ ಸೌಲಭ್ಯಗಳನ್ನು ಒದಗಿಸಲು ಕ್ರಮ ಜರುಗಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಮುಂದುವರೆದು, ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರದ ವ್ಯಾಪ್ತಿಗೊಳಪಡುವ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮಾಜ ಕಲ್ಯಾಣ ಇಲಾಖೆ/ಹಿಂದುಳಿದ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ/ವೃತ್ತಿನಿರತ ವಸತಿನಿಲಯಗಳ ಸ್ಥಳೀಯ ಅಧಿಕಾರಿಗಳೊಂದಿಗೆ ಸಂವಹನ ಹಾಗೂ ಸಮನ್ವಯತೆ ಸಾಧಿಸಿ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ವಸತಿನಿಲಯಗಳಲ್ಲಿ ತಂಗಲು ಸೂಕ್ತ ವ್ಯವಸ್ಥೆ ಕಲ್ಪಿಸಬೇಕೆಂದು ತಿಳಿಸಲಾಗಿದೆ.

ಜಂಟಿ ನಿರ್ದೇಶಕರು(ಆಡಳಿತ).

**ಪ್ರತಿ ಇವರಿಗೆ:**

ಇ-ಆಡಳಿತ ವಿಭಾಗ- ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.